**Akashvani : Bangalore**
**Regional Bulletin In Kannada**
**28.03.2025 / 14.30 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**28.03.2025 / 14.30  hrs**

**<><*<><>*><>**

<u>ಮುಖ್ಯಾಂಶಗಳು</u>

**೧. ಪರಿಶಿಷ್ಟ ಜಾತಿಗಳಲ್ಲಿ ಒಳಮೀಸಲಾತಿ: ನಾಗಮೋಹನ್ ದಾಸ್ ಸಮಿತಿ ಅವಧಿ ಎರಡು ತಿಂಗಳವರೆಗೆ ವಿಸ್ತರಣೆ**

**೨. ಬೇಸಿಗೆ ಹಿನ್ನೆಲೆ; ರಾಜ್ಯದ ಜಲಾಶಯಗಳಿಂದ ಕುಡಿಯುವ ನೀರು ಬಿಡುಗಡೆ ಕುರಿತು ಚರ್ಚೆ**

**೩. ಹಾಲು, ವಿದ್ಯುತ್ ದರ ಏರಿಕೆಗೆ ಕೇಂದ್ರ ಸಚಿವ  ಕುಮಾರಸ್ವಾಮಿ ಖಂಡನೆ**

**೪. ನಾಡಿನ ವಿವಿಧೆಡೆ ಅಗ್ನಿ ಬನ್ನಿರಾಯಸ್ವಾಮಿ ಜಯಂತಿ ಆಚರಣೆ**

**<><*<><>*><>**

ಪರಿಶಿಷ್ಟ ಜಾತಿಗಳಲ್ಲಿ ಒಳಮೀಸಲಾತಿ ಕಲ್ಪಿಸುವ ಸಂಬಂಧ ನಿವೃತ್ತ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್ ದಾಸ್ ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಏಕಸದಸ್ಯ ಆಯೋಗ ನೀಡಿದ ಮಧ್ಯಂತರ ವರದಿಯನ್ನು ಸಚಿವ ಸಂಪುಟ ಸಭೆಯು ಅಂಗೀಕರಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಈ ಸಂಬಂಧ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಮುಖ್ಯಮಂತ್ರಿ, ಹೊಸ ಸಮೀಕ್ಷೆಯಿಂದ ಸಂಗ್ರಹಿಸಿದ ದತ್ತಾಂಶದ ಆಧಾರದ ಮೇಲೆ  ವರದಿಯಲ್ಲಿ ತಿಳಿಯಪಡಿಸಿರುವ ಮಾನದಂಡಗಳಂತೆ ಪರಿಶಿಷ್ಟ ಜಾತಿಯಲ್ಲಿರುವ ಉಪಜಾತಿಗಳ ವರ್ಗೀಕರಣಗೊಳಿಸಿ ಲಭ್ಯವಿರುವ ಮೀಸಲಾತಿ ಪ್ರಮಾಣವನ್ನು ಆದ್ಯತೆ ಮೇಲೆ ಹಂಚಿಕೆ ಮಾಡಬೇಕು ಎಂದು ಸಮಿತಿ ಶಿಫಾರಸ್ಸು ಮಾಡಿದೆ ಎಂದು ಹೇಳಿದ್ದಾರೆ. ಹೊಸ ಸಮೀಕ್ಷೆ ನಡೆಸುವ ಕಾರ್ಯವನ್ನು ನಾಗಮೋಹನ್ ದಾಸ್ ಸಮಿತಿಗೆ ವಹಿಸಲು ಸಚಿವ ಸಂಪುಟ ನಿರ್ಣಯಿಸಿದೆ. ಸಮೀಕ್ಷಾ ಕಾರ್ಯವನ್ನು ೬೦ ದಿನದೊಳಗೆ ಪೂರ್ಣಗೊಳಿಸಿ ವರದಿ ಸಲ್ಲಿಸಲು ಅನುಕೂಲವಾಗುವಂತೆ ಸಮಿತಿಯ ಅವಧಿಯನ್ನು ಎರಡು ತಿಂಗಳವರೆಗೆ ವಿಸ್ತರಿಸಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ಬಿರು ಬೇಸಿಗೆ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ಕೊರತೆಯಾಗದಂತೆ ರಾಜ್ಯದ ಜಲಾಶಯಗಳಿಂದ ನೀರು ಬಿಡುಗಡೆ ಕುರಿತು ಸಚಿವ ಸಂಪುಟ ಸಭೆಯಲ್ಲಿ ಚರ್ಚೆಯಾಗಿದೆ ಎಂದು ಕಾನೂನು ಸಚಿವ ಎಚ್ ಕೆ ಪಾಟೀಲ್ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ  ಮಾತನಾಡಿದ ಅವರು ಕುಡಿಯುವ ನೀರಿನ ನಿರ್ವಹಣೆ ಬಗ್ಗೆ ಮುಖ್ಯ ಕಾರ್ಯದರ್ಶಿಗಳ ನೇತೃತ್ವದಲ್ಲಿ ಸಮಿತಿ ರಚಿಸಲಾಗಿದೆ. ಇದು ಒಂದು ವಾರದೊಳಗೆ ಚರ್ಚೆ ಮಾಡಿ ಸೂಕ್ತ ನಿರ್ದೇಶನ ನೀಡಲಿದೆ ಎಂದರು.

**(ಧ್ವನಿ) ಕಾನೂನು ಸಚಿವ ಎಚ್ ಕೆ ಪಾಟೀಲ್ ( ೩೪ ಸೆಕೆಂಡ್‌ಗಳು)**

**<><*<><>*><>**

ಹಾಲು ಮತ್ತು ವಿದ್ಯುತ್ ದರ ಏರಿಕೆ ಹಿನ್ನೆಲೆಯಲ್ಲಿ ರಾಜ್ಯ ಕಾಂಗ್ರೆಸ್ ಸರಕಾರದ ವಿರುದ್ಧ ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ತೀವ್ರ ವಾಗ್ದಾಳಿ ನಡೆಸಿದ್ದಾರೆ. ರಾಜ್ಯದಲ್ಲಿ ಹಾಲಿನ ಹಾಲಾಹಲ ಶುರುವಾಗಿದೆ. ೩ನೇ ಸಲ ದರ ಏರಿಕೆ ಮಾಡಲಾಗಿದೆ. ಹಾಗೆಯೇ ವಿದ್ಯುತ್

ಕೂಡ ದುಬಾರಿ ಆಗಿದೆ. ಜನರಿಗೆ ವಿದ್ಯುತ್ ಶಾಕ್ ನೀಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಹಾಲು, ವಿದ್ಯುತ್ ದರ ಏರಿಕೆಯನ್ನು ಖಂಡಿಸಿದ್ದು, ಹೆಚ್ಚಳ ಮಾಡಲಾದ ಹಣ ರೈತರಿಗೆ ವರ್ಗಾವಣೆ ಆಗಲಿದೆಯೇ ಅಥವಾ ಕೆಎಂಎಫ್ ತಾನೇ ಉಳಿಸಿಕೊಳ್ಳಲಿದೆಯೋ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದ್ದಾರೆ.

<><*<><>*><>

ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ವಿಮಾನಯಾನಕ್ಕೆ ಸಂಬಂಧಿಸಿದ ಸೌಲಭ್ಯ ಒದಗಿಸಬೇಕೆಂದು ಕೇಂದ್ರ ನಾಗರಿಕ ವಿಮಾನಯಾನ ಸಚಿವ ಕಿಂಜರಾಪು ರಾಮ್ ಮೋಹನ್ ನಾಯ್ಡು ಅವರಲ್ಲಿ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಮನವಿ ಮಾಡಿದ್ದಾರೆ. ಹುಬ್ಬಳ್ಳಿ- ಧಾರವಾಡ, ಬೆಳಗಾವಿ ಸೇರಿದಂತೆ ಇತರೆ ಜಿಲ್ಲೆಗಳು ಅಭಿವೃದ್ಧಿ ಪಥದಲ್ಲಿ ಸಾಗುತ್ತಿದ್ದು, ಈ ಜಿಲ್ಲೆಗಳಲ್ಲಿಯೂ ವಿಮಾನ ನಿಲ್ದಾಣಗಳಿಗೆ ಸುವ್ಯವಸ್ಥೆ ಜೊತೆಗೆ ಮೇಲ್ದರ್ಜೆಗೆರಿಸಬೇಕೆಂದು ಕೋರಿದ್ದಾರೆ.

<><*<><>*><>

ವಿಜಯಪುರ ನಗರಕ್ಕೆ ಕುಡಿಯುವ ನೀರು ಪೂರೈಸುವ ಯೋಜನೆಗಾಗಿ ೫೦ ಕೋಟಿ ರೂಪಾಯಿ ಮೊತ್ತದ ಕಾಮಗಾರಿಗೆ ಸಚಿವ ಸಂಪುಟದಲ್ಲಿ ಅನುಮೋದನೆ ದೊರೆತಿದೆ ಎಂದು ಕೈಗಾರಿಕೆ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ. ಕೃಷ್ಣಾ ನದಿಯಿಂದ ನೀರೆತ್ತಿ ಕೊಲ್ಹಾರದಿಂದ ಮುಳವಾಡ, ಹೊನಗನಹಳ್ಳಿ, ವಿಜಯಪುರ ಮಾರ್ಗದಲ್ಲಿ ಅಳವಡಿಸಿರುವ ಪಿ.ಎಸ್.ಸಿ ಕೊಳವೆ ಮಾರ್ಗ ಪದೇ ಪದೇ ಒಡೆದು ಕುಡಿಯುವ ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತಿತ್ತು. ಈ ಸಮಸ್ಯೆಯನ್ನು ಸರಿಪಡಿಸಿ ಎಂ.ಎಸ್. ಪೈಪ್ ಅಳವಡಿಕೆ ಮತ್ತಿತರ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ಸಚಿವರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

<><*<><>*><>

ಹಾವೇರಿ ಜಿಲ್ಲೆ ಸವಣೂರಿನಲ್ಲಿರುವ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಸ್ಥಳಾಂತರ ನಿರ್ಧಾರ ಕೈಬಿಟ್ಟು ಆಯುರ್ವೇದಿಕ್ ಮಹಾವಿದ್ಯಾಲಯ ಕಟ್ಟಡಕ್ಕೆ ಅಗತ್ಯ ಅನುದಾನ ನೀಡುವಂತೆ ಸಂಸದ ಬಸವರಾಜ ಬೊಮ್ಮಾಯಿ ಅವರು ಮಾಡಿದ್ದ ಮನವಿಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸ್ಪಂದಿಸಿದ್ದಾರೆ. ಈ ಕುರಿತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗೆ ನಿರ್ದೇಶನ ನೀಡಿರುವ ಅವರು, ಸವಣೂರು ತಾಲ್ಲೂಕ್ ಆಸ್ಪತ್ರೆಯನ್ನು ಅಲ್ಲಿಯೇ ಮುಂದುವರೆಸಲು ಹಾಗೂ ಆಯುರ್ವೇದಿಕ್ ಮಹಾ ವಿದ್ಯಾಲಯಕ್ಕೆ ಅನುದಾನ ಒದಗಿಸಲು ನಿಯಮಾನುಸಾರ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ.

<><*<><>*><>

ನಾಡಿನ ವಿವಿಧೆಡೆ ಇಂದು ಅಗ್ನಿ ಬನ್ನಿರಾಯಸ್ವಾಮಿ ಜಯಂತಿಯನ್ನು ಆಚರಿಸಲಾಗುತ್ತಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಿಲ್ಲಾಡಳಿತ ಭವನದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಹೆಚ್. ಅಮರೇಶ್ ಅವರು ಅಗ್ನಿ ಬನ್ನಿರಾಯ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಗೌರವ ನಮನ ಸಲ್ಲಿಸಿದರು. ಅಗ್ನಿ ಬನ್ನಿರಾಯರು ಶ್ರಮ ಜೀವಿ. ಅವರ ಶ್ರಮಕ್ಕೆ ಗೌರವ ಸೂಚಿಸುವ ನಿಟ್ಟಿನಲ್ಲಿ ಪ್ರತಿ ವರ್ಷ ಮಾರ್ಚ್ ೨೮ ರಂದು ಅಗ್ನಿ ಬನ್ನಿರಾಯ ಜಯಂತಿಯನ್ನು ಆಚರಿಸಲಾಗುತ್ತದೆ ಎಂದರು. ದೊಡ್ಡಬಳ್ಳಾಪುರ ತಾಲ್ಲೂಕ್ ಕಚೇರಿಯಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅಗ್ನಿ ಬನ್ನಿರಾಯಸ್ವಾಮಿ ಅವರ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ಎ.ಬಿ.ಬಸವರಾಜು ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಿದರು. ಅಗ್ನಿ ಬನ್ನಿರಾಯಸ್ವಾಮಿ ಅವರು ಮನುಕುಲಕ್ಕೆ ನೀಡಿರುವ ಕೊಡುಗೆಯನ್ನು ಸ್ಮರಿಸಬೇಕಿದೆ. ಎಲ್ಲಾ ದೇವರು , ಧರ್ಮ ಒಂದೇ ಎನ್ನುವ ಭಾವನೆಯಿಂದ ಮನುಕುಲದ ಏಳಿಗೆಯಾಗಬೇಕು ಎಂದರು.

<><*<><>*><>

ಕೋಲಾರ ಜಿಲ್ಲೆಯಲ್ಲಿ ಹತ್ತು ಸಾವಿರ ಎಕರೆ ಅರಣ್ಯ ಇಲಾಖೆ ಭೂಮಿ ಒತ್ತುವರಿ ಆಗಿದೆ ಎಂದು ಜಿಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿ ಸರೀನಾ ಸಿಕ್ಕಲೀಗಾರ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಲವರು ನಕಲಿ ದಾಖಲೆ ಸೃಷ್ಟಿಸಿಕೊಂಡು ಅರಣ್ಯ ಒತ್ತುವರಿ ಮಾಡಿಕೊಂಡಿದ್ದಾರೆ. ಅವುಗಳ ತೆರವಿಗೆ ಎಲ್ಲಾ ತಾಲೂಕುಗಳಲ್ಲಿ ಕಾರ್ಯಾಚರಣೆ ಪ್ರಾರಂಭಿಸಲಾಗಿದೆ ಎಂದು ಹೇಳಿದರು. ಬಂಗಾರಪೇಟೆ ತಾಲೂಕಿನ ಕಾಮಸಮುದ್ರ ಅರಣ್ಯದಲ್ಲಿ ೨೦ ಎಕರೆ ಹಾಗೂ ಕೋಲಾರ ತಾಲ್ಲೂಕಿನ ಅಬ್ಬಣಿ ಅರಣ್ಯ ಪ್ರದೇಶದಲ್ಲಿ ತೆರವು ಕಾರ್ಯ ಆರಂಭವಾಗಿದೆ. ಹರಟಿ ಅರಣ್ಯ ಭಾಗದ ೬೧೮ ಎಕರೆ ಒತ್ತುವರಿಯ ಪೈಕಿ ಎರಡು ದಿನಗಳಲ್ಲಿ ೨೧೦ ಎಕರೆ ತೆರವು ಮಾಡಲಾಗಿದೆ ಎಂದರು.

**(ಧ್ವನಿ- ಜಿಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿ ಸರೀನಾ ಸಿಕ್ಕಲೀಗಾರ್ ( ೩೪ ಸೆಕೆಂಡ್‌ಗಳು)**

**<><*<><>*><>**

ಯೋಗ ಕ್ರೀಡೆಗೆ ಅತ್ಯುನ್ನತವಾದ ಕೊಡುಗೆ ನೀಡಿರುವ ಕ್ರೀಡಾಪಟುಗಳು ಅಥವಾ ಯೋಗ ಸಂಸ್ಥೆಗಳಿಗೆ ಪ್ರಧಾನ ಮಂತ್ರಿಗಳು ರಾಷ್ಟ್ರೀಯ ಮಟ್ಟ ಅಥವಾ ಅಂತಾರಾಷ್ಟ್ರೀಯ ಮಟ್ಟದ ಅತ್ಯುನ್ನತ ಯೋಗ ಪ್ರಶಸ್ತಿಯನ್ನು ಘೋಷಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**